Akashvani : Bangalore
Regional Bulletin In Kannada
14.02.2025 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- ಮಹಿಳೆಯರು ನಿರ್ಭೀತರಾಗಿ, ಅಡೆತಡೆಗಳನ್ನು ಮೀರಿ ಬೆಳೆಯಬೇಕು; ಅಂತಾರಾಷ್ಟ್ರೀಯ ಮಹಿಳಾ ಸಮಾವೇಶದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು
- ಜಾಗತಿಕ ಹೂಡಿಕೆದಾರರ ಸಮಾವೇಶ-ಇನ್ವೆಸ್ಟ್ ಕರ್ನಾಟಕ ಸಂಪನ್ನ
- ಏರೋ ಇಂಡಿಯಾ ವೈಮಾನಿಕ ಪ್ರದರ್ಶನ -೨೦೨೫ ತೆರೆ
- ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರಿಂದ ನಾಳೆ ಬೆಂಗಳೂರಿನಲ್ಲಿ ರೈಲ್ವೆ ಯೋಜನೆಗಳ ಪ್ರಗತಿ ಪರಿಶೀಲನೆ

<><*<><>*><>

ಮಹಿಳೆಯರು ದೊಡ್ಡ ಕನಸು ಕಾಣಬೇಕು ಮತ್ತು ತಮ್ಮ ಕನಸುಗಳನ್ನು ನನಸಾಗಿಸಲು ಶಕ್ತಿ ಮತ್ತು ಸಾಮರ್ಥ್ಯದೊಂದಿಗೆ ಧೈರ್ಯವನ್ನು ಒಗ್ಗೂಡಿಸಿಕೊಳ್ಳಬೇಕು ಎಂದು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು. ಬೆಂಗಳೂರಿನ ಆರ್ಟ್ ಆಫ್ ಲಿವಿಂಗ್‌ನ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ಇಂದು ೧೦ನೇ ಅಂತಾರಾಷ್ಟ್ರೀಯ ಮಹಿಳಾ ಸಮಾವೇಶ ಉದ್ದೇಶಿಸಿ ಅವರು ಮಾತನಾಡಿದರು. ಮಹಿಳೆಯರು ನಿರ್ಭೀತರಾಗಿರಬೇಕು. ಮಹತ್ವಾಕಾಂಕ್ಷೆಯ ಗುರಿಗಳನ್ನು ಹೊಂದಬೇಕು ಮತ್ತು ಅಡೆ-ತಡೆಗಳನ್ನು ಮೀರಿ ಬೆಳೆಯಬೇಕು ಎಂದು ರಾಷ್ಟ್ರಪತಿಗಳು ಕರೆ ನೀಡಿದರು. ಸಹಾನುಭೂತಿ, ಪ್ರೀತಿ ಮತ್ತು ಮಾನವೀಯ ಮೌಲ್ಯಗಳನ್ನು ಉತ್ತೇಜಿಸಲು ಪ್ರತಿಯೊಬ್ಬ ಮನುಷ್ಯನು ಪ್ರಜ್ಞಾಪೂರ್ವಕವಾಗಿ ಹೆಚ್ಚುವರಿ ಪ್ರಯತ್ನವನ್ನು ಮಾಡಬೇಕಾಗಿದೆ ಎಂದರು. ಮಹಿಳೆಯರು ಸಹಾನುಭೂತಿಯ ಮೂಲಕ ಮುನ್ನಡೆಯುವ ವಿಶೇಷ ಸಾಮರ್ಥ್ಯವನ್ನು ಹೊಂದಿದ್ದಾರೆ. ಅವರು ವ್ಯಕ್ತಿಯನ್ನು ಮೀರಿ ನೋಡುವ ಮತ್ತು ಕುಟುಂಬಗಳು, ಸಮುದಾಯಗಳು ಮತ್ತು ಜಾಗತಿಕ ಶಾಂತಿಗಾಗಿ ಕೆಲಸ ಮಾಡುವ ಸಾಮರ್ಥ್ಯವನ್ನು ಹೊಂದಿದ್ದಾರೆ ಎಂದು ಹೇಳಿದರು. ಆಧ್ಯಾತ್ಮಿಕ ತತ್ವಗಳು ತಮ್ಮ ಜೀವನ ಮತ್ತು ಸುತ್ತಲಿನವರ ಜೀವನವನ್ನು ಹೆಚ್ಚು ಸುಂದರ ಮತ್ತು ಶಾಂತಿಯುತವಾಗಿಸುತ್ತದೆ. ಯಾವುದೇ ಮಹಿಳೆ ಅರ್ಥಪೂರ್ಣ ಜೀವನವನ್ನು ನಡೆಸುವ ಹಾಗೂ ಕುಟುಂಬ, ಸಮಾಜ ಮತ್ತು ಜಗತ್ತಿಗೆ ಕೊಡುಗೆ ನೀಡುವ ಸಾಮರ್ಥ್ಯಕ್ಕೆ ಮಾನಸಿಕ ಸ್ವಾಸ್ಥ್ಯವು ಮೂಲಭೂತವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದರು.

ಧ್ವನಿ: ರಾಷ್ಟ್ರಪತಿ ದ್ರೌಪದಿ ಮುರ್ಮು ( ೩೫ ಸೆಕೆಂಡ್‌ಗಳು)

ಈ ವೇಳೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಕೇಂದ್ರ ಸಚಿವರಾದ ಅನ್ನಪೂರ್ಣ ದೇವಿ, ಶೋಭಾ ಕರಂದ್ಲಾಜೆ, ಮಾಜಿ ಸಚಿವೆ ಮೀನಾಕ್ಷಿ ಲೇಖಿ ಉಪಸ್ಥಿತರಿದ್ದರು. ಆರ್ಟ್ ಆಫ್ ಲಿವಿಂಗ್ ಆಯೋಜಿಸಿರುವ ಈ ಸಮ್ಮೇಳನದಲ್ಲಿ ಕಾಮನ್‌ವೆಲ್ತ್ ಪ್ರಧಾನ ಕಾರ್ಯದರ್ಶಿ ಪೆಟ್ರೀಷಿಯಾ ಸ್ಕಾಟ್ಲೆಂಡ್, ಜಪಾನ್‌ನ ಮಾಜಿ ಪ್ರಧಾನಿ ಶಿಂಜೊ ಅಬೆ ಅವರ ಪತ್ನಿ ಅಕಿ ಅಬೆ ಸೇರಿದಂತೆ ೧೧೫ ದೇಶಗಳ ರಾಜಕೀಯ, ಉದ್ಯಮ, ಕಲೆ ಮತ್ತು ಸಾಮಾಜಿಕ ವಲಯ ಸೇರಿದಂತೆ ವಿವಿಧ ಕ್ಷೇತ್ರಗಳ ೬ ಸಾವಿರಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿದ್ದಾರೆ. ಅಲ್ಲದೆ ೬೦ಕ್ಕೂ ಹೆಚ್ಚು ಭಾಷಣಕಾರರು ಮತ್ತು ೫೦೦ಕ್ಕೂ ಹೆಚ್ಚು ಪ್ರತಿನಿಧಿಗಳು ಪಾಲ್ಗೊಂಡಿದ್ದಾರೆ.

<><*<><>*><>

ಜಾಗತಿಕ ಬಂಡವಾಳ ಹೂಡಿಕೆ ಸಮಾವೇಶ ಕರ್ನಾಟಕದ ಸಾಮರ್ಥ್ಯಕ್ಕೆ ಸಾಕ್ಷಿಯಾಗಿದೆ. ಬಂಡವಾಳ ಹೂಡಿಕೆ ವಿಚಾರದಲ್ಲಿ ಕರ್ನಾಟಕ ದೇಶದ ಇತರೆ ನಗರಗಳ ಜತೆ ಸ್ಪರ್ಧೆ ಮಾಡುತ್ತಿಲ್ಲ. ಬದಲಿಗೆ ಜಾಗತಿಕ ಮಟ್ಟದಲ್ಲಿ ಸ್ಪರ್ಧೆ ಮಾಡುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಭಿಪ್ರಾಯಪಟ್ಟರು. ಇನ್ವೆಸ್ಟ್ ಕರ್ನಾಟಕ-ಜಾಗತಿಕ ಹೂಡಿಕೆದಾರರ ಸಮಾವೇಶದ ಅಂತಿಮ ದಿನದ ಇಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆದ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಅವರು, ಕಳೆದ ನಾಲ್ಕು ದಿನಗಳಲ್ಲಿ ಈ ಸಮಾವೇಶದಲ್ಲಿ ಅನೇಕ ಒಪ್ಪಂದಗಳು, ಚರ್ಚೆಗಳು ನಡೆದಿವೆ ಎಂದರು.  ದೇಶದ ಭವಿಷ್ಯಕ್ಕಾಗಿ ಉದ್ಯಮ ಸಂಸ್ಥೆಗಳು ಕರ್ನಾಟಕದಲ್ಲಿ ಬಂಡವಾಳ ಹೂಡಿಕೆ ಮಾಡಬೇಕು. ಬೆಂಗಳೂರಿನ ಹೊರತಾಗಿ ಪ್ರಗತಿ ಸಾಧಿಸಲು ನಾವು ಗುರಿ ಹೊಂದಿದ್ದೇವೆ. ರಾಜ್ಯದಲ್ಲಿ ಏರೋಸ್ಪೇಸ್ ಕ್ಷೇತ್ರದಲ್ಲಿ ಎಂಎಸ್‌ಎಂಇ ಗಳು ದೊಡ್ಡ ಶಕ್ತಿ ತುಂಬುತ್ತಿವೆ. ಬಾಹ್ಯಾಕಾಶ ಕ್ಷೇತ್ರದ ಸಾಧನೆಗೆ ರಾಕೆಟ್‌ಗಳನ್ನು ಪೀಣ್ಯ ಕೈಗಾರಿಕಾ ಪ್ರದೇಶದಲ್ಲೇ ತಯಾರು ಮಾಡಲಾಗಿದೆ ಎಂದು ಹೇಳಿದರು. ಈ ಸಮಾವೇಶದ ಮೂಲಕ ರಾಜ್ಯಕ್ಕೆ ೧೦ ಲಕ್ಷ ಕೋಟಿ ಬಂಡವಾಳ ಹೂಡಿಕೆಯ ಗುರಿ ಹೊಂದಲಾಗಿದೆ. ರಾಜ್ಯದ ನೂತನ ಕೈಗಾರಿಕಾ ನೀತಿಯು ಬೆಂಗಳೂರಿನ ಹೊರತಾಗಿ ರಾಜ್ಯದ ಇತರೆ ಪ್ರದೇಶಗಳಲ್ಲಿ ಬಂಡವಾಳ ಹೂಡಿಕೆ ಮಾಡುವವರಿಗೆ ಹೆಚ್ಚಿನ ಪ್ರೋತ್ಸಾಹ ನೀಡಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭರವಸೆ ನೀಡಿದರು.

<><*<><>*><>

ಇದೇ ೧೦ನೇ ತಾರೀಖಿನಿಂದ ಬೆಂಗಳೂರಿನ ಯಲಹಂಕದ ವಾಯುನೆಲೆಯಲ್ಲಿ ನಡೆದ ಏರೋ ಇಂಡಿಯಾ ವೈಮಾನಿಕ ಪ್ರದರ್ಶನ ೨೦೨೫ಕ್ಕೆ ಇಂದು ತೆರೆ ಬಿದ್ದಿದೆ. ವಾಣಿಜ್ಯ ವ್ಯವಹಾರಗಳಿಗೆ ಮೀಸಲಿಟ್ಟ ದಿನಗಳ ಬಳಿಕ, ಕೊನೆಯ ಎರಡು ದಿನ ಸಾರ್ವಜನಿಕ ವೀಕ್ಷಣೆಗೆ ಅವಕಾಶ ಕಲ್ಪಿಸಿದ

ಹಿನ್ನೆಲೆಯಲ್ಲಿ, ಅಪಾರ ಸಂಖ್ಯೆಯಲ್ಲಿ ಜನರು ವೈಮಾನಿಕ ಪ್ರದರ್ಶನವನ್ನು ವೀಕ್ಷಿಸಿದರು. ವೈಮಾನಿಕ ಪ್ರದರ್ಶನದಲ್ಲಿ ಸೂರ್ಯಕಿರಣ, ಅಮೆರಿಕದ ಎಫ್-೩೫, ರಷ್ಯಾದ ಎಸ್‌ಯು-೫೭, ಸುಖೋಯ್, ತೇಜಸ್ ಹಾಗೂ ಹಗುರ ಯುದ್ಧ ಹೆಲಿಕಾಪ್ಟರ್‌ಗಳ ಪ್ರದರ್ಶನ ಮೈನವಿರೇಳಿಸಿದವು.

<><*<><>*><>

ಕೇಂದ್ರ ರೈಲ್ವೆ, ವಾರ್ತಾ ಮತ್ತು ಪ್ರಸಾರ ಖಾತೆ ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಖಾತೆ ಸಚಿವರಾದ ಅಶ್ವಿನಿ ವೈಷ್ಣವ್ ನಾಳೆ ಬೆಂಗಳೂರಿನ ವಲಯ ರೈಲ್ವೆ ವ್ಯವಸ್ಥಾಪಕ ಕಚೇರಿಯಲ್ಲಿ ರೈಲ್ವೆ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಲಿದ್ದಾರೆ. ನಂತರ ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಲಿದ್ದಾರೆ. ಬಳಿಕ ನಗರದ ಖಾಸಗಿ ಹೋಟೆಲ್‌ನಲ್ಲಿ ಸಂಜೆ ನಡೆಯಲಿರುವ ಇಂಟಲೆಕ್ಚುಯಲ್ ಮೀಟ್ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ.

<><*<><>*><>

ಮೆಟ್ರೋ ಪ್ರಯಾಣ ದರ ಏರಿಕೆ ಆದೇಶವನ್ನು ಕೂಡಲೇ ವಾಪಸ್ ಪಡೆಯಬೇಕು ಎಂದು ಒತ್ತಾಯಿಸಿ ಜೆಡಿಎಸ್ ಕಾರ್ಯಕರ್ತರು, ಮುಖಂಡರು ಇಂದು ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಜೆಡಿಎಸ್ ನಗರ ಘಟಕದ ಅಧ್ಯಕ್ಷ ಹೆಚ್.ಎಂ.ರಮೇಶ್ ಗೌಡ, ದರ ಏರಿಕೆ ಆದೇಶ ವಾಪಸ್ ಪಡೆಯುವಂತೆ ಮೆಟ್ರೋ ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ಎರಡು ಬಾರಿ ಮನವಿ ಸಲ್ಲಿಸಲಾಗಿದೆ. ತಕ್ಷಣವೇ ದರ ಏರಿಕೆ ಆದೇಶ ಹಿಂಪಡೆಯದಿದ್ದರೆ ಮುಖ್ಯಮಂತ್ರಿಗಳ ನಿವಾಸಕ್ಕೆ ಮುತ್ತಿಗೆ ಹಾಕಲಾಗುವುದು ಎಂದು ಹೇಳಿದರು.

<><*<><>*><>

ಚಿತ್ರದುರ್ಗ ನಗರದ ವಿ.ಪಿ.ಬಡಾವಣೆಯಲ್ಲಿರುವ ಜಿಲ್ಲಾ ತೋಟಗಾರಿಕೆ ಇಲಾಖೆ ಆವರಣದಲ್ಲಿ ನಾಳೆಯಿಂದ ೧೭ ರವರೆಗೆ ಫಲ-ಪುಷ್ಪ ಪ್ರದರ್ಶನ ಏರ್ಪಡಿಸಲಾಗಿದೆ. ಮಯೂರ ವರ್ಮ, ಹೆಣ್ಣಿಗೆ ಗೌರವ ಸೂಚಕ ಕಲಾಕೃತಿ, ಸ್ವಾವಲಂಬಿ ರೈತ ಹಾಗೂ ವಾಣಿವಿಲಾಸ ಸಾಗರ ಕಲಾಕೃತಿಯು ಈ ಬಾರಿಯ ಫಲ-ಪುಷ್ಪ ಪ್ರದರ್ಶನದ ವಿಶೇಷ ಆಕರ್ಷಣೆ ಎಂದು ತೋಟಗಾರಿಕೆ ಉಪನಿರ್ದೇಶಕಿ ಜಿ.ಸವಿತಾ ತಿಳಿಸಿದ್ದಾರೆ. ವಿವಿಧ ಜಾತಿಯ ಹೂಗಳು, ಹಣ್ಣುಗಳು, ತರಕಾರಿಗಳು ಮತ್ತು ಹಲವು ವಿಶೇಷ ಬಗೆಯ ಅಲಂಕಾರಿಕಾ ಗಿಡಗಳನ್ನು ಬೆಳೆಸಿ ಪ್ರದರ್ಶಿಸಲಾಗುತ್ತಿದೆ. ಫಲ-ಪುಷ್ಪ ಪ್ರದರ್ಶನದಲ್ಲಿ ಹೂವಿನ ಗಿಡಗಳ ಬೃಹತ್ ಪ್ರದರ್ಶನ, ಬೋನ್ಸಾಯ್ ಗಿಡಗಳು, ತರಕಾರಿ ಕೆತ್ತನೆ,

ಅಲಂಕಾರಿಕಾ ಗಿಡಗಳ ಜೋಡಣೆ ಹಾಗೂ ಜಿಲ್ಲೆಯ ರೈತರು ಬೆಳೆದಿರುವ ಹಣ್ಣು ಮತ್ತು ತರಕಾರಿಗಳ ಪ್ರದರ್ಶನ ಏರ್ಪಡಿಸಿ, ವಿವಿಧ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದರು.

<><*<><>*><>

ಇದೇ ತಿಂಗಳ ೧೭ ರಂದು ಉಡುಪಿಯಿಂದ ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನ ಮಹಾಕುಂಭಮೇಳಕ್ಕೆ ತೆರಳಲು ವಿಶೇಷ ರೈಲು ವ್ಯವಸ್ಥೆ ಮಾಡಲಾಗಿದೆ ಎಂದು ಉಡುಪಿ-ಚಿಕ್ಕಮಗಳೂರು ಸಂಸದ ಕೋಟಾ ಶ್ರೀನಿವಾಸ ಪೂಜಾರಿ ತಿಳಿಸಿದ್ದಾರೆ. ಚಿಕ್ಕಮಗಳೂರು ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ಉಡುಪಿ, ಚಿಕ್ಕಮಗಳೂರು, ದಕ್ಷಿಣ ಕನ್ನಡ ಜಿಲ್ಲೆಗಳ ಒಂದು ಸಾವಿರದ ೩೦೦ ಹೆಚ್ಚು ಯಾತ್ರಾರ್ಥಿಗಳು ಮುಂಗಡ ಬುಕ್ಕಿಂಗ್ ಮಾಡಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದರು.

<><*<><>*><>

’ಎ’ ಖಾತೆ ಹೊರತುಪಡಿಸಿದ ಎಲ್ಲಾ ಆಸ್ತಿಗಳನ್ನು ಅಧಿಕೃತಗೊಳಿಸಲು ಮನೆ, ನಿವೇಶನ ಆಸ್ತಿಗಳಿಗೆ ’ಬಿ’ ಖಾತಾವನ್ನು ನೀಡಲು ರಾಜ್ಯ ಸರ್ಕಾರ ಮಹತ್ವದ ತೀರ್ಮಾನ ತೆಗೆದುಕೊಂಡಿದೆ. ಚಿಕ್ಕಬಳ್ಳಾಪುರ ನಗರಸಭೆ ವ್ಯಾಪ್ತಿಯ ಸಾರ್ವಜನಿಕರ ಅನುಕೂಲಕ್ಕಾಗಿ ಇದೇ ತಿಂಗಳ ೨೦, ೨೧ ಮತ್ತು ೨೨ನೇ ತಾರೀಖಿನಂದು ಮೂರು ದಿನಗಳ ಕಾಲ ’ಬಿ’ ಖಾತಾ ವಿಶೇಷ ಆಂದೋಲನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ಪ್ರದೀಪ್ ಈಶ್ವರ್ ತಿಳಿಸಿದ್ದಾರೆ. ಈ ಕುರಿತು ಚಿಕ್ಕಬಳ್ಳಾಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಎಲ್ಲಾ ನಿಯಮಗಳನ್ನು ಪೂರೈಸಿ ’ಎ’ ಖಾತಾ ಪಡೆದುಕೊಂಡ ಅಧಿಕೃತ ಆಸ್ತಿಗಳಿವೆ. ಅವುಗಳನ್ನು ಹೊರತುಪಡಿಸಿ, ಹಲವು ಮನೆ, ನಿವೇಶನಗಳು ಮತ್ತಿತರ ಆಸ್ತಿಗಳು ಖಾತೆಯಾಗದೇ ಹಾಗೇ ಉಳಿದುಕೊಂಡು ಸಾರ್ವಜನಿಕರು ಪರದಾಡುವ ಪರಿಸ್ಥಿತಿ ಹಲವು ವರ್ಷಗಳಿಂದ ಬಹುದೊಡ್ಡ ಸಮಸ್ಯೆಯಾಗಿತ್ತು. ಇದನ್ನು ಸರಿಪಡಿಸಲು ವಿಶೇಷ ಆಂದೋಲನ ಹಮ್ಮಿಕೊಳ್ಳಲಾಗಿದ್ದು, ಚಿಕ್ಕಬಳ್ಳಾಪುರ ನಗರದ ಸಾರ್ವಜನಿಕರು ಈ ಸದವಕಾಶವನ್ನು ಬಳಸಿಕೊಳ್ಳಬೇಕು ಎಂದು ಅವರು ಮನವಿ ಮಾಡಿದರು.

<><*<><>*><>

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ವಸತಿ ಶಾಲೆಗಳಲ್ಲಿ ೬ನೇ ತರಗತಿ ಪ್ರವೇಶಕ್ಕೆ ಇದೇ ೧೫ ರಂದು ನಡೆಯಲಿರುವ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಕಲು ಮುಕ್ತ ಹಾಗೂ ವ್ಯವಸ್ಥಿತವಾಗಿ ನಡೆಸಲು ಸಕಲ ಸಿದ್ಧತೆ ಮಾಡಿಕೊಳ್ಳುವಂತೆ ಯಾದಗಿರಿ ಹೆಚ್ಚುವರಿ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ

ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಇನ್ನೂ ಮಂಡ್ಯ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಮಂಡ್ಯ ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಬಿ.ಸಿ.ಶಿವಾನಂದಮೂರ್ತಿ ಅಧ್ಯಕ್ಷತೆಯಲ್ಲಿ ವಸತಿ ಶಾಲೆಗಳ ೬ನೇ ತರಗತಿ ಪ್ರವೇಶಕ್ಕೆ ನಡೆಸಲಾಗುವ ಸಾಮಾನ್ಯ ಪ್ರವೇಶ ಪರೀಕ್ಷೆ ಕುರಿತ ಪೂರ್ವಸಿದ್ಧತಾ ಸಭೆ ನಡೆಯಿತು.

<><*<><>*><>

ಗ್ರಾಮ ಆಡಳಿತಾಧಿಕಾರಿಗಳು ಅನಿರ್ಧಿಷ್ಟಾವಧಿ ಮುಷ್ಕರ ಕೈಗೊಂಡಿರುವ ಹಿನ್ನೆಲೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆಯಲು ಆಗುತ್ತಿರುವ ವಿಳಂಬ ತಪ್ಪಿಸಲು, ದಾವಣಗೆರೆ ಜಿಲ್ಲೆಯಲ್ಲಿ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೬.೩೫ ಕ್ಕೆ <>*><>